ಎಲ್ಲರಿಗೂ ಸೌಲಭ್ಯಗಳು ದೊರೆಯಲಿ

ತುರುವೇಕೆರೆ, ಸೆ.1-ಪ್ರಾಮಾಣಿಕವಾಗಿ ಯಾವುದೇ ಸೌಲಭ್ಯಗಳನ್ನು ಸಮಾಜದ ಕಟ್ಟ ಕಡೆಯ ವ್ಯಕ್ತಿಗೂ ತಲುಪಿಸುವಂತ ಕಾರ್ಯವನ್ನು ಶ್ರೀ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಮಾಡುತ್ತಿದೆ ಎಂದು ಶ್ರೀ ಧ.ಗ್ರಾ.ಯೋ.ನಿರ್ದೇಶಕ ಮಾದೇಗೌಡ ತಿಳಿಸಿದರು.

ತಾಲೂಕಿನ ದಂಡಿನಶಿವರ ಹೋಬಳಿ ಸಂಪಿಗೆ ಶ್ರೀ ಶ್ರೀನಿವಾಸ ದೇವಾಲಯ ಆವರಣದಲ್ಲಿ ಶ್ರೀ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ ಹಮ್ಮಿಕೊಂಡಿದ್ದ ವಲಯಮಟ್ಟದ ಸಾಮೂಹಿಕ ಶ್ರೀ ವರಮಹಾಲಕ್ಷ್ಮಿ ಪೂಜಾ ಕಾರ್ಯಕ್ರಮದಲ್ಲಿ ಧಾರ್ಮಿಕ ಉಪನ್ಯಾಸ ನೀಡಿ ಮಾತನಾಡಿದ ಅವರು, ನಾವೆಲ್ಲಾ ಇಂದು ಒಗ್ಗೂಡಿ ಪ್ರಾರ್ಥಿಸುವುದರಿಂದ ನಮ್ಮ ಗ್ರಾಮಕ್ಕೆ, ರಾಜ್ಯಕ್ಕೆ ಹಾಗೂ ದೇಶಕ್ಕೆ ಒಳಿತಾಗಲಿದೆ ಎಂಬ ಭಾವನೆಯಿಂದ ಇಂತಹ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿದ್ದೇವೆ ಎಂದು ಹೇಳಿದರು.

ನಮ್ಮ ದೇಶದ ಧರ್ಮ, ಸಂಸ್ಕೃತಿ, ಧಾರ್ಮಿಕತೆಯನ್ನು ಮುನ್ನಡೆಸುವ ಕಾರ್ಯವನ್ನು ನಾವೆಲ್ಲರು ಮಾಡಬೇಕಿದೆ. ನಮ್ಮ ಕುಟುಂಬದ ಜೊತೆಗೆ ಹೊರಗಿನವರು ಬದುಕಲಿ ಎಂಬ ಆಸೆಯನ್ನಿಟ್ಟುಕೊಳ್ಳಬೇಕು. ಮಕ್ಕಳಿಗೆ ಸಂಸ್ಕಾರ ಮೂಡಿಸಬೇಕಾದ್ದು ತಾಯಂದಿರ ಕರ್ತವ್ಯ. ತಾಳ್ಮೆಯ ಪ್ರತೀಕವೇ ತಾಯಿ. ಭಾರತಾಂಬೆಯ ಮಡಿಲಲ್ಲಿ ಹುಟ್ಟಿದ ನಾವೇ ಧನ್ಯರು ಎಂದರು.

ತುಮುಲ್ ನಿರ್ದೇಶಕ ಸಿ.ವಿ.ಮಹಾಲಿಂಗಯ್ಯ ಮಾತನಾಡಿ ಮಹಿಳೆಯರು ಆರ್ಥಿಕವಾಗಿ ಸದೃಢರಾದರೆ ಅಂತಹ ಕುಟುಂಬ ಅಭಿವೃದ್ಧಿಯಾದಂತೆ. ಹೈನುಗಾರಿಕೆ, ಕೃಷಿ ಚಟುವಟಿಕೆಗೆ ಈ ಸಂಸ್ಥೆ ಒತ್ತು ನೀಡಿ ನೂರಾರು ಕೋಟಿ ಹಣ ಹೂಡಿ ಅಭಿವೃದ್ಧಿ ಪಥದತ್ತ ಕೊಂಡೊಯ್ದು ಮಹಿಳೆಯರನ್ನು ಅಬಲೆಯನ್ನಾಗಿಸುತ್ತಿರುವುದು ಶ್ಲಾಘನೀಯ ಎಂದರು.

ಶ್ರೀನಿವಾಸ ದೇವಾಲಯದ ಅಧ್ಯಕ್ಷ ಶ್ರೀಧರ್ ಮಾತನಾಡಿ ಡಾ.ವಿರೇಂದ್ರ ಹಗಡೆಯವರು ಸಮಾಜಮುಖಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಲಕ್ಷಾಂತರ ಯುವಕರಿಗೆ, ಮಹಿಳೆಯರಿಗೆ ಸ್ವಾಲಂಬನೆ ಬದುಕು ಕಲ್ಪಿಸಿಕೊಡುವ ಹತ್ತಾರು ಕಾರ್ಯಕ್ರಮಗಳನ್ನು ನೀಡುವುದರ ಜೊತೆಗೆ ದೇವರು, ನಂಬಿಕೆ, ಧರ್ಮ, ಸಂಸ್ಕೃತಿಯನ್ನು ಉಳಿಸುವುದಲ್ಲದೆ ರಾಷ್ಟ್ರಮಟ್ಟದಲ್ಲಿ ಗುರ್ತಿಸುವಂತೆ ಮಾಡಿದ ಮಹಾನ್ ವ್ಯಕಿತಿಯಾಗಿದ್ದಾರೆ ಎಂದು ಅಭಿಪ್ರಾಯ ಪಟ್ಟರು.

ದೊಡ್ಡಗುಣಿ ಶ್ರೀ ರೇವಣಸಿದ್ದೇಶ್ವರ ಶಿವಾಚಾರ್ಯ ಮಹಾ ಸ್ವಾಮಿಗಳು ದಿವ್ಯ ಸಾನಿಧ್ಯ ವಹಿಸಿದ್ದು ಆಶೀರ್ವಚನ ನೀಡಿದರು. ಸಂಪಿಗೆ ಗ್ರಾ.ಪಂ.ಅಧ್ಯಕ್ಷ ತಿಮ್ಮೇಗೌಡ , ಗ್ರಾ.ಪಂ.ಸದಸ್ಯ ಕುರುಬರಹಳ್ಳಿ ರವಿಕುಮಾರ್, ಮಹಲಿಂಗಮ್ಮ, ಮಮತಅಶೋಕ್, ಪಟೇಲ್ ಮಲ್ಲಿಕಾರ್ಜುನಸ್ವಾಮಿ, ದೇವರಾಜು ಮತ್ತಿತರರು ಪಾಲ್ಗೊಂಡಿದ್ದರು.

ಭಾವೈಕ್ಯತೆ ರಾಷ್ಟ್ರ ನಿರ್ಮಾಣಕ್ಕೆ ಶ್ರಮಿಸಿರಿ

ಆನೇಕಲ್, ಸೆ. 1- ಜಾತಿ ಮತ ಧರ್ಮಗಳ ಎಲ್ಲೆ ಮೀರಿ ಭಾವೈಕ್ಯತೆ ರಾಷ್ಟ್ರ ನಿರ್ಮಾಣ ಮಾಡುವಲ್ಲಿ ಎಲ್ಲರೂ ಒಟ್ಟಾಗಿ ಶ್ರಮಿಸಬೇಕಿದೆ ಎಂದು ಅತ್ತಿಬೆಲೆ ಪೋಲಿಸ್ ಠಾಣೆಯ ಉಪನಿರೀಕ್ಷಕ ನವೀನ್ ತಿಳಿಸಿದರು.

ತಾಲ್ಲೂಕಿನ ಅತ್ತಿಬೆಲೆ ಎಪಿಎಸ್ ಶಾಲಾ ಆವರಣದಲ್ಲಿ ದಕ್ಷಿಣ ವಲಯ ಸಾಂಸ್ಕೃತಿಕ ಕೇಂದ್ರ, ಚಿನ್ಮಯ ಸೇವಾ ಸಂಸ್ಥೆ, ಭಗತ್ ಸಿಂಗ್ ಯುವಸೇನೆ ಸಹಯೋಗದಲ್ಲಿ ನಡೆದ ಈಶಾನ್ಯ ರಾಜ್ಯಗಳ ಹಾಗೂ ಕರ್ನಾಟಕ ರಾಜ್ಯದ ಕಲಾ ತಂಡಗಳಿಂದ ರಾಷ್ಟ್ರೀಯ ಸಾಂಸ್ಕೃತಿಕ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಭಾರತವು ಬಹುಭಾಷೆ ಸಂಸ್ಕೃತಿ, ಅನೇಕ ವೇಷ ಭೂಷಣಗಳಿಂದ ಕೂಡಿದ ದೇಶವಾಗಿದೆ ಎಂದರು. ರಾಷ್ಟ್ರೀಯ ಭಾವೈಕ್ಯತೆಯನ್ನು ಮುಂದಿನ ನಾಗರೀಕರಾದ ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸುವ ಅಗತ್ಯವಿದೆ. ಶಿಕ್ಷಕರು ವಿದ್ಯಾರ್ಥಿಗಳಿಗೆ ದೇಶ ಪ್ರೇಮ ಕಾಳಜಿ ಹುಟ್ಟಿಸುವಂತಹ ಉದಾಹರಣೆಗಳನ್ನು ನೀಡುತ್ತಾ ರಾಷ್ಟ್ರೀಯ ಮನೋಭಾವನೆಯನ್ನು ಬೆಳೆಸುವ ಪ್ರಯತ್ನ ಮಾಡಬೇಕು ಎಂದರು.

ಎಪಿಎಸ್ ಸಮೂಹ ಶಿಕ್ಷಣ ಸಂಸ್ಥೆಗಳ ಅಧ್ಯಕ್ಷ ಜಿ.ಮುನಿರಾಜು ಮಾತನಾಡಿ ಸರ್ವ ಜನಾಂಗದ ಶಾಂತಿಯ ತೋಟದ ಪರಿಕಲ್ಪನೆಯ ಸೌಹಾರ್ದ ಭಾರತವನ್ನು ಕಟ್ಟುವಲ್ಲಿ ಸಮಾನತೆ, ಸೌಹಾರ್ದತೆ, ಐಕ್ಯತೆ ಸಹಬಾಳ್ವೆ ಸೇರಿದಂತೆ ಎಲ್ಲಾ ರೀತಿಯ ಹಕ್ಕುಗಳನ್ನು ನೀಡಿದ್ದು, ವಿದ್ಯಾರ್ಥಿಗಳು ಸಾರ್ವಭೌಮತ್ವದ ರಾಷ್ಟ್ರದ ಪ್ರಜೆಗಳಾಗಿ ಬದುಕನ್ನು ಕಟ್ಟಿಕೊಳ್ಳಬೇಕು, ದೇಶಾಭಿಮಾನದ ಒಕ್ಕೊರಲಿನ ಕೂಗು ನಮ್ಮದಾಗಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಸಮಾಜ ಸೇವಕ ಟಿ.ವಿ.ಬಾಬು, ರಾಷ್ಟ್ರೀಯ ಯುವ ಪ್ರಶಸ್ತಿ ಪುರಸ್ಕೃತ ಡಾ. ಚಿನ್ನಪ್ಪ ಚಿಕ್ಕಹಾಗಡೆ, ರಾಜ್ಯ ಪ್ರಶಸ್ತಿ ಪುರಸ್ಕೃತ ಮಹೇಶ್, ಖಾಸಗಿ ಶಿಕ್ಷಣ ಸಂಸ್ಥೆಗಳ ಸಂಘದ ಶೇಖರ್, ಜ್ಯೋತಿಗೌಡ, ಕಿಶೋರ್ ಶರ್ಮ, ಥಾಮಸ್, ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಮತ್ತಿತರರು ಹಾಜರಿದ್ದರು.

ಬಸ್, ರೈಲು ನಿಲ್ದಾಣದಲ್ಲಿ ಪರಿಶೀಲನೆ

ಗೌರಿಬಿದನೂರು, ಸೆ.1- ಉಗ್ರರ ತಂಡವೊಂದು ಕರ್ನಾಟಕ , ಕೇರಳ ಹಾಗೂ ತಮಿಳುನಾಡು ಸೇರಿದಂತೆ ದೇಶದ ಹಲವು ಕಡೆ ನುಸುಳಿದ್ದಾರೆ ಎನ್ನುವ ಕೇಂದ್ರ ಸರಕಾರದ ಗುಪ್ತಚರ ಇಲಾಖೆಯ ಮಾಹಿತಿಯ ಹಿನ್ನೆಲೆಯಲ್ಲಿ ಜಿಲ್ಲಾ ಬಾಂಬ್ ನಿಷ್ಕ್ರಿಯ ತಂಡ ಹಾಗೂ ಶ್ವಾನದಳದ ಪೊಲೀಸರು ನಗರದ ಬಸ್ ಮತ್ತು ರೈಲು ನಿಲ್ದಾಣಗಳಲ್ಲಿ ತಪಾಸಣೆ ನಡೆಸಿದರು.

ಜನನಿಬಿಡ ಸ್ಥಳಗಳಲ್ಲಿ ಉಗ್ರರ ಕುಕೃತ್ಯ ನಡೆಸುವ ಸಾಧ್ಯತೆಗಳಿರುವ ನಿಟ್ಟಿನಲ್ಲಿ ಈ ತಂಡಗಳು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿದರು.

ಜಿಲ್ಲಾ ಬಾಂಬ್ ನಿಷ್ಕ್ರಿಯ ತಂಡದ ಎಎಸ್ಐ ಮಂಜುನಾಥ್ ನೇತೃತ್ವದ ತಂಡ ಬಸ್ ಹಾಗೂ ರೈಲು ನಿಲ್ದಾಣದಲ್ಲಿನ ವಾಹನ ನಿಲ್ದಾಣ, ಅಂಗಡಿ ಮುಗ್ಗಟ್ಟು , ಚರಂಡಿ, ಶೌಚಾಲಯ, ಇನ್ನಿತರೆ ಎಲ್ಲ ಆಯಕಟ್ಟಿನ ಸ್ಥಳಗಳಲ್ಲೂ ಸೂಕ್ಷ್ಮವಾಗಿ ಪರಿಶೀಲಿಸಿದರು.

ನಿಲ್ದಾಣಗಳಲ್ಲಿ ಕಸ ಕಡ್ಡಿ ಹಾಕುವ ಡಸ್ಟ್‌ಬಿನ್ ಗಳನ್ನು ಪ್ರತಿದಿನವೂ ಖಾಲಿ ಮಾಡಬೇಕು , ಯಾರೂ ವಾರಸುದಾರರು ಇಲ್ಲದ, ಅನುಮಾನ ಮೂಡಿಸುವಂಥ ವಾಹನಗಳು ಹೆಚ್ಚು ಸಮಯ ಅಥವಾ ದಿನಗಳ ಕಾಲ ನಿಂತಿದ್ದರೆ ಅಂತಹವುಗಳ ಬಗ್ಗೆಯೂ ಎಚ್ಚರಿಕೆಯಿಂದ ಇರಬೇಕು, ಹಳೆ ಬಟ್ಟೆ ಬ್ಯಾಗ್‌ಗಳ ಗಂಟುಗಳು ಬಿದ್ದಿದ್ದರೆ ಅನುಮಾನ ಬಂದ ತಕ್ಷಣವೇ ನಿಲ್ದಾಣದ ಸಂಬಂದ ಪಟ್ಟ ಅಧಿಕಾರಿಗಳಿಗೆ ಸಾರ್ವಜನಿಕರು, ಪ್ರಯಾಣಿಕರು ಮಾಹಿತಿಯನ್ನು ನೀಡುವ ಮೂಲಕ ಮುಂದಾಗುವ ಅನಾಹುತಗಳನ್ನು ತಡೆಯುವಲ್ಲಿ ಇಲಾಖೆಯೊಂದಿಗೆ ನಗರೀಕರು ಸಹಕರಿಸಬೇಕು ಎಂದು ಎಎಸ್ಐ ಸಾರ್ವಜನಿಕರಲ್ಲಿ ಮನವಿ ಮಾಡಿದರು.

ಜಿಲ್ಲಾ ಬಾಂಬ್ ನಿಷ್ಕ್ರಿಯ ತಂಡದ ಎಎಸ್ಐ ಮಿಲ್ಲರ್‌ಪಿಲಿಪ್ಸ್, ಮುಖ್ಯ ಪೇದೆಗಳಾದ ಶಿವ ಕುಮಾರ್, ದಯಾನಂದ್, ಅರ್ಜುನ್, ವೆಂಕಟಾಚಲಪತಿ ಹಾಜರಿದ್ದರು.

ಕುಷ್ಠರೋಗ ಪತ್ತೆ ಆಂದೋಲನ

ಬೆಂ.ನ. ಜಿ., ಸೆ.1- ಬೆಂಗಳೂರು ನಗರ ಜಿಲ್ಲೆಯಲ್ಲಿ ಸೆಪ್ಟೆಂಬರ್ 5 ರಿಂದ 23 ರವರೆಗೆ ಕುಷ್ಠರೋಗ ಪತ್ತೆ ಹಚ್ಚುವ ಆಂದೋಲನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಕುಷ್ಠರೋಗ ನಿಯಂತ್ರಾಣಧಿಕಾರಿ ತಿಳಿಸಿದ್ದಾರೆ.

ನಗರ ಪ್ರದೇಶದ ಹೆಚ್ಚಿನ ಅಪಾಯಕರ ಪ್ರದೇಶದ 4,04,234 ಜನಸಂಖ್ಯೆ ಹಾಗೂ ಗ್ರಾಮೀಣ ಪ್ರದೇಶದ 16,92,669 ಜನಸಂಖ್ಯೆಯನ್ನು ಸಮೀಕ್ಷೆ ಮಾಡಲು ಉದ್ದೇಶಿಸಿದ್ದು, ಈ ಸಂದರ್ಭದಲ್ಲಿ 3112 ಪುರುಷರು ಹಾಗೂ ಮಹಿಳಾ ಸ್ವಯಂ ಸೇವಾ ಕಾರ್ಯಕರ್ತರು,ಆಶಾ ಕಾರ್ಯಕರ್ತರ ಮುಖೇನಾ ಯೋಜಿತಾ ಅವಧಿಯಲ್ಲಿ ಮನೆ ಮನೆ ಭೇಟಿ ನೀಡಿ, ಕುಟುಂಬದ ಎರಡು ವರ್ಷ ಮೇಲ್ಪಟ್ಟ ಎಲ್ಲಾ ಸದಸ್ಯರನ್ನು ಕುಷ್ಠ ರೋಗ ತಪಾಸಣೆಗೆ ಒಳಪಡಿಸಲಾಗುವುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನೀರಿನ ಸಂರಕ್ಷಣೆಗೆ ಒತ್ತು ನೀಡಿ

ಚಿಕ್ಕಬಳ್ಳಾಪುರ, ಸೆ.1- ಜಿಲ್ಲೆಯಲ್ಲಿ ಬರದಿಂದ ದಿನೇ ದಿನೇ ನೀರಿನ ಅಭಾವ ಹೆಚ್ಚಾಗುತ್ತಿದೆ. ಮುಂದಿನ ದಿನಗಳಲ್ಲಿ ಮತ್ತಷ್ಟು ನೀರಿನ ಸಮಸ್ಯೆ ತಲೆದೋರುವುದನ್ನು ತಪ್ಪಿಸಲು ನೀರಿನ ಸಂರಕ್ಷಣೆಗೆ ಹೆಚ್ಚು ಒತ್ತು ನೀಡುವ ಕಾರ್ಯಕ್ರಮಗಳಿಗೆ ಮತ್ತಷ್ಟು ಪ್ರಾಮುಖ್ಯತೆಯನ್ನು ನೀಡಲಾಗುತ್ತಿದೆ ಎಂದು ನೂತನ ಜಿಲ್ಲಾಧಿಕಾರಿ ಆರ್. ಲತಾ ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಜಿಲ್ಲೆಯ ಜಿಲ್ಲಾಧಿಕಾರಿಯಾಗಿ 2 ದಿನಗಳ ಹಿಂದೆ ಅಧಿಕಾರಿ ಸ್ವೀಕರಿಸಿದ್ದೇನೆ. ಈ 2 ದಿನಗಳ ಅನುಭವದಲ್ಲಿ ಹಲವಾರು ಕಾರ್ಯ ಚಟುವಟಿಕೆಗಳ ಬಗ್ಗೆ ಅಧ್ಯಯನ ಮಾಡಿದ್ದು ಜಿಲ್ಲೆಯಲ್ಲಿ ಮುಖ್ಯವಾಗಿ ನೀರಿನ ಸಮಸ್ಯೆಯು ತುಂಬ ಗಂಭೀರವಾಗಿ ಪರಿಗಣನೆಗೆ ತೆಗೆದುಕೊಳ್ಳಲಾಗಿದೆ. ನೀರಿನ ಸಮಸ್ಯೆಯಿಂದ ಪಾರಾಗಲು ಮಳೆ ನೀರಿನ ಕೊಯ್ಲು ಯೋಜನೆಯನ್ನು ಅಭಿವೃದ್ಧಿಪಡಿಸಲು ಈಗಾಗಲೇ ಜಿಲ್ಲಾಡಳಿತ ಮುಂದಾಗಿದೆ. ಮುಂದಿನ ದಿನಗಳಲ್ಲಿ ಮತ್ತಷ್ಟು ಪರಿಣಾಮಕಾರಿಯಾದ ಯೋಜನೆಗಳ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳ ಜೊತೆ ಚರ್ಚಿಸಲಾಗುತ್ತಿದೆ. ನೀರಿನ ಸಮಸ್ಯೆ ಆದಾಗ ಕೊಳವೆ ಬಾವಿಗಳನ್ನು ಕೊರೆಯುವುದು ಅಸಾಧ್ಯ, ಇದಕ್ಕೆ ಬದಲಾಗಿ ಪ್ರಕೃತಿಯಿಂದ ಬೀಳುವ ಮಳೆಯನ್ನು ನಾವು ಯಾವ ರೀತಿಯಲ್ಲಿ ಸಂಗ್ರಹಿಸಬೇಕು ಎಂಬುವುದರ ಕುರಿತು ಯೋಜನೆಗಳನ್ನು ರೂಪಿಸುವುದು ಉತ್ತಮ ಎಂದರು.

ಜಿಲ್ಲೆಯಲ್ಲಿ ಎಸ್.ಎಸ್.ಎಲ್.ಸಿ ಫಲಿತಾಂಶ ಮಟ್ಟವನ್ನು ಉತ್ತಮಪಡಿಸಿ ಉನ್ನತ ಸ್ಥಾನಕ್ಕೇರಿಸಲು ವೈಯಕ್ತಿಕವಾಗಿ ಶ್ರಮಿಸುವ ಅಗತ್ಯವಿದೆ. ಇದಕ್ಕೆ ಜಿಲ್ಲೆಯ ಸಾರ್ವಜನಿಕ ಶಿಕ್ಷಣ ಇಲಾಖೆ ಅಧಿಕಾರಿಗಳು, ಬಿಇಒಗಳು, ಶಿಕ್ಷಕರು ಮುಖ್ಯವಾಗಿ ವಿದ್ಯಾರ್ಥಿಗಳು ಸಹಕರಿಸಬೇಕು. ಮಕ್ಕಳ ಅಪೌಷ್ಠಿಕತೆಯ ಬಗ್ಗೆ ಹೆಚ್ಚಿನ ರೀತಿಯ ಗಮನ ಹರಿಸಿ ಅವರಿಗೆ ಪೌಷ್ಠಿಕ ಆಹಾರವನ್ನು ನೀಡಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಹೇಳಿದರು.

ಜಿಲ್ಲೆಯಲ್ಲಿ ಗಣೇಶ ಹಬ್ಬದ ಪ್ರಯುಕ್ತ ಪಿಒಪಿ ಗಣೇಶ ಮೂರ್ತಿಗಳನ್ನು ನಿಷೇಧಿಸಿರುವ ಹಿನ್ನೆಲೆಯಲ್ಲಿ ಪರಿಸರ ಸ್ನೇಹಿಯಾದ ಮಣ್ಣಿನ ಗಣೇಶ ಮೂರ್ತಿಗಳನ್ನು ಸಾರ್ವಜನಿಕ ಸ್ಥಳಗಳಲ್ಲಿ , ಮನೆಗಳಲ್ಲಿ ಇಡಬೇಕು. ಒಂದು ವೇಳೆ ಪಿಒಪಿ ಗಣೇಶ ಮೂರ್ತಿಗಳನ್ನಿಟ್ಟರೆ ಕ್ರಮ ಜರುಗಿಸಲಾಗುತ್ತದೆ ಎಂದರು. ಕಂದಾಯ ಇಲಾಖೆ, ತಾಲ್ಲೂಕು ಪಂಚಾಯತ್, ನಗರ ಸ್ಥಳೀಯ ಸಂಸ್ಥೆಗಳಲ್ಲಿ ಅಧಿಕಾರಿಗಳು ಸ್ನೇಹಿಜೀವಿಯಾಗಿ ರೈತರ ಸಮಸ್ಯೆಗಳನ್ನು ಪರಿಹರಿಸಬೇಕು ಎಂದು ಹೇಳಿದರು.

ಕನಕಪುರದಲ್ಲಿ ಮಾಜಿ ಸಚಿವ ಡಿ.ಕೆ.ಶಿವಕುಮಾರ್‌ರವರಿಗೆ ಇ.ಡಿ.ಸಂಸ್ಥೆ ಸಮನ್ಸ್ ಜಾರಿ ಮಾಡಿರುವುದನ್ನು ವಿರೋಧಿಸಿ ಪ್ರತಿಭಟನೆ ನಡೆಸಿದರು. ಆರ್.ಕೃಷ್ಣಮೂರ್ತಿ, ಅನಿಲ್‌ಕುಮಾರ್, ಎಂ.ಡಿ.ವಿಜಯದೇವ್ ಸೇರಿದಂತೆ ಅನೇಕರು ಮಾತನಾಡಿದರು.

ಅಂಕಗಳಿಸಲು ಓದಬೇಡಿ ಮಾನವೀಯ ಮೌಲ್ಯಗಳನ್ನು ರೂಢಿಸಿಕೊಳ್ಳಿ

ವಿಜಯಪುರ, ಸೆ.1- ವಿದ್ಯಾರ್ಥಿಗಳು ತಮ್ಮ ಶಿಕ್ಷಣವನ್ನು ಕೇವಲ ಅಂಕಗಳಿಗೋಸ್ಕರ ಓದದೇ ಮಾನವೀಯ ಮೌಲ್ಯಗಳನ್ನು ಮೈಗೂಡಿಸಿಕೊಳ್ಳಿ ಎಂದು ಯೋಗ ಶಿಕ್ಷಕ ಮಧು ತಿಳಿಸಿದರು.

ಪಟ್ಟಣದ ನಗರೇಶ್ವರಸ್ವಾಮಿ ಎಜುಕೇಷನ್ ಟ್ರಸ್ಟ್ ನ ಪ್ರಗತಿ ಪ್ರಥಮ ದರ್ಜೆ ಕಾಲೇಜು ವತಿಯಿಂದ 2019-20 ನೇ ಸಾಲಿನ ಪ್ರಥಮ ವರ್ಷದ ಪದವಿ ವಿದ್ಯಾರ್ಥಿಗಳಿಗೆ ಸ್ವಾಗತ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಹಿರಿಯ ವಿದ್ಯಾರ್ಥಿಗಳು ತಮ್ಮ ಕಿರಿಯ ವಿದ್ಯಾರ್ಥಿಗಳನ್ನು ಸಹೋದರರಂತೆ ಭಾವಿಸಿ ಅವರಿಗೆ ತಿಳಿಹೇಳುವ ಮನೋಭಾವ ರೂಢಿಸಿಕೊಳ್ಳಬೇಕು. ಪೋಷಕರ, ಶಿಕ್ಷಕರ ಆಶಾಭಾವನೆಗಳಿಗೆ ಜೀವ ತುಂಬುವ ವಿದ್ಯಾರ್ಥಿಗಳು ನೀವಾಗಬೇಕೆಂದು ಅವರು ತಿಳಿಸಿದರು.

ವಿದ್ಯಾರ್ಥಿಗಳು ಹೆಚ್ಚು ಅಂಕ ಗಳಿಸುವುದಷ್ಟೇ ಜೀವನದ ಗುರಿಯಲ್ಲ. ನಾವು ನಮ್ಮ ಮುಂದಿನ ಜೀವನದಲ್ಲಿ ಮಹತ್ತರ ವಾದುದನ್ನು ಸಾಧಿಸಲು ನಮ್ಮ ನಡವಳಿಕೆ, ಮಾತನಾಡುವ ಕಲೆ ಇಂತಹ ಕೌಶಲ್ಯಗಳನ್ನು ಅಳವಡಿಸಿಕೊಳ್ಳುವುದು ಮುಖ್ಯ ಎಂದು ನಗರೇಶ್ವರ ಸ್ವಾಮಿ ಎಜುಕೇಷನ್ ಟ್ರಸ್ಟ್‌ನ ನಿರ್ದೇಶಕ ಕೃಪಾ ಶಂಕರ್ ತಿಳಿಸಿದರು.

ಇದರೊಂದಿಗೆ ಎನ್.ಎಸ್.ಎಸ್. ಚಟುವಟಿಕೆಗಳ ಉದ್ಘಾಟನಾ ಮತ್ತು ಪ್ರತಿಭಾ ಪುರಸ್ಕಾರ ಸಮಾರಂಭ ನಡೆಯಿತು.

ಪದವಿ ಪ್ರಥಮ ವರ್ಷ ಮತ್ತು ದ್ವಿತೀಯ ಪರೀಕ್ಷೆಯಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ 5 ಸಾವಿರ ರೂ. ನಗದು ಹಾಗೂ ನೆನಪಿನ ಕಾಣಿಕೆ ಮತ್ತು ಕ್ರೀಡೆಯಲ್ಲಿ ಭಾಗವಹಿಸಿದ ವಿದ್ಯಾರ್ಥಿಗಳಿಗೆ ನೆನಪಿನ ಕಾಣಿಕೆ ನೀಡಲಾಯಿತು.

ನಗರೇಶ್ವರಸ್ವಾಮಿ ಎಜುಕೇಷನ್ ಟ್ರಸ್ಟ್‌ನ ನಿರ್ದೇಶಕರು, ಕಾರ್ಯಕ್ರಮಾಧಿಕಾರಿ ಶೆಟ್ಟಿನಾಯ್ಕ್ ಮತ್ತು ಸಿಬ್ಬಂದಿ ವರ್ಗ ಹಾಜರಿದ್ದರು.

ಇಡಿಯಿಂದ ಡಿಕೆಶಿ ವಿಚಾರಣೆ ಖಂಡಿಸಿ ಪ್ರತಿಭಟನೆ

ಕನಕಪುರ, ಸೆ.1- ಕೇಂದ್ರ ಸರ್ಕಾರದ ರಾಜಕೀಯ ಚಿತಾವಣೆಯಿಂದ ಕಾಂಗ್ರೆಸ್ ಪಕ್ಷದ ನಿಷ್ಠಾವಂತ ಕಾರ್ಯಕರ್ತ ಮುಖಂಡ ಹಾಗು ಮಾಜಿ ಸಚಿವ ಡಿ.ಕೆ.ಶಿವಕುಮಾರ್‌ರವರ ವಿರುದ್ಧ ಇ.ಡಿ. ಅಧಿಕಾರಿಗಳು ವಿನಾಕಾರಣ ತೊಂದರೆ ನೀಡುತ್ತಿದ್ದಾರೆಂದು ಆರೋಪಿಸಿ ಕಾಂಗ್ರೆಸ್ ಪಕ್ಷದ ವತಿಯಿಂದ ಬೃಹತ್ ಪ್ರತಿಭಟನೆ ನಡೆಸಿದರು.

ಯೂತ್ ಕಾಂಗ್ರೆಸ್ ಸೇರಿದಂತೆ ಪಕ್ಷದ ಕಾರ್ಯಕರ್ತ ಮುಖಂಡರು ಪಟ್ಟಣದ ಚನ್ನಬಸಪ್ಪ ವೃತ್ತದಲ್ಲಿ ಜಮಾವಣೆಗೊಂಡು ಪ್ರಧಾನಮಂತ್ರಿ ನರೇಂದ್ರ ಮೋದಿ ಮತ್ತು ಅಮಿತ್ ಷಾರವರ ವಿರುದ್ಧ ಘೋಷಣೆಗಳನ್ನು ಕೂಗಿದರು. ನಂತರ ಎಂ.ಜಿ.ರಸ್ತೆ, ಕೆ.ಎಸ್.ಎಸ್. ಸರ್ಕಲ್ ಮೂಲಕ ಮೆರವಣಿಗೆ ನಡೆಸಿದ ಮುಖಂಡರು ರಸ್ತೆತಡೆ ಚಳವಳಿ ನಡೆಸಿ ಬಿಜೆಪಿಯ ವಿರುದ್ಧ ತಮ್ಮ ಆಕ್ರೋಶ ವ್ಯಕ್ತಪಡಿಸಿದರು. ಪ್ರತಿಭಟನೆಯಿಂದಾಗಿ ಕೆಲಕಾಲ ಸಂಚಾರ ಸ್ಥಗಿತವಾಗಿ ಪ್ರಯಾಣಿಕರು ಪರದಾಡುವಂತಾಯಿತು.

ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಆರ್.ಕೃಷ್ಣಮೂರ್ತಿ, ಮುಖಂಡರಾದ ಎಂ.ಡಿ.ವಿಜಯದೇವ್, ಸಾತನೂರು ಶಂಕರ್, ವಕೀಲ ರಾಮಚಂದ್ರಪ್ಪ, ಕೆ.ಪಿ.ಸಿ.ಸಿ. ಸದಸ್ಯ ಕೆ.ಆರ್.ಗಣೇಶ್, ಜೆಡಿಎಸ್ ಅಧ್ಯಕ್ಷ ಬಿ.ನಾಗರಾಜು ಸೇರಿದಂತೆ ಅನೇಕರು ಮಾತನಾಡಿದರು.

ಜನಪರ ಮತ್ತು ಪ್ರಗತಿಪರ ಆಡಳಿತ ನೀಡಬೇಕಾದ ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರ ರಾಜಕೀಯ ದುರುದ್ದೇಶದಿಂದ ವಿರೋಧ ಪಕ್ಷದವರನ್ನು ಹಣಿಯಬೇಕೆಂಬ ಉದ್ದೇಶದಿಂದ ನಮ್ಮ ಪಕ್ಷದ ನಿಷ್ಠಾವಂತ ಮಾಜಿ ಸಚಿವ ಡಿ.ಕೆ.ಶಿವಕುಮಾರ್‌ರನ್ನು ಅಣಿಯಲು ಇ.ಡಿ. ಸಮನ್ಸ್ ನೀಡಿ ಕಿರುಕುಳ ನೀಡುತ್ತಿದ್ದಾರೆ. ಕೂಡಲೇ ಬಿಜೆಪಿ ಸರ್ಕಾರ ಇಂತಹ ಕೆಟ್ಟ ಚಾಳಿಯನ್ನು ಕೈಬಿಡಬೇಕು. ಇದೇರೀತಿ ಲಾಲೂಪ್ರಸಾದ್ ಯಾದವ್, ಕೇಂದ್ರ ಮಾಜಿ ಸಚಿವ ಚಿದಂಬರ್‌ರವರ ಮೇಲೂ ಕೂಡ ಪ್ರಹಾರ ನಡೆಸುತ್ತಿದ್ದಾರೆ. ಇದೇರೀತಿ ಮುಂದುವರೆದರೆ ಕಾನೂನು ಹೋರಾಟ ನಡೆಸಲಾಗುವುದು ಎಂದರು.

ಜಿ.ಪಂ. ಸದಸ್ಯ ಗಡ್ಡಶಿವಕುಮಾರ್, ತಾ.ಪಂ. ಅಧ್ಯಕ್ಷ ಧನಂಜಯ, ಮಾಜಿ ಅಧ್ಯಕ್ಷ ಬಿ.ಎಸ್.ದೊಡ್ಡರವಿ, ಬ್ಲಾಕ್ ಅಧ್ಯಕ್ಷ ಒರಳಗಲ್ಲುರಮೇಶ್, ಯೂತ್ ಕಾಂಗ್ರೆಸ್ ಅಧ್ಯಕ್ಷ ಅನಿಲ್‌ಕುಮಾರ್, ದೀಪು ಮತ್ತಿತರರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

ಹೊಸಕೋಟೆ ತಾಲ್ಲೂಕು ಕಸಬಾ ಹೋಬಳಿಯ ಕುರುಬರಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಮಾಜಿ ಸಚಿವ ಎಂಟಿಬಿ ನಾಗರಾಜ್ ಹುಟ್ಟು ಹಬ್ಬದ ಪ್ರಯುಕ್ತ ಶಾಲಾ ಮಕ್ಕಳಿಗೆ ಉಚಿತ ನೋಟ್ ಪುಸ್ತಕ ವಿತರಿಸಲಾಯಿತು. ಗ್ರಾ. ಪಂ. ಸದಸ್ಯರಾದ ಟಿ.ವೆಂಕಟೇಶ್, ಕೃಷ್ಣೋಜಿರಾವ್, ಬಿ.ಬಸವರಾಜು, ಮುತ್ತುರಾಜ್, ಮುಖ್ಯಶಿಕ್ಷಕಿ ಶಾಂತತುಂಗಲ್ ಮತ್ತಿತರರು ಪಾಲ್ಗೊಂಡಿದ್ದರು.

ಎಟಿಎಂ ವಂಚಕನ ಸೆರೆ

ಗೌರಿಬಿದನೂರು, ಸೆ.1-ಹಣ ಡ್ರಾ ಮಾಡಲು ಸಹಾಯ ಮಾಡುವ ನೆಪದಲ್ಲಿ ಆಟೋ ಚಾಲಕರೊಬ್ಬರ ಹಣ ದೋಚಿದ್ದ ಯುವಕನನ್ನು ಬಂಧಿಸುವಲ್ಲಿ ನಗರ ಠಾಣೆ ಪೊಲೀಸರು ಯಶಸ್ವಿಯಾಗಿದ್ದಾರೆ.

ಆಂಧ್ರ ಪ್ರದೇಶದ ಹಿಂದೂಪುರ ತಾಲ್ಲೂಕಿನ ಸಿಂಗಪಲ್ಲಿ ಗ್ರಾಮದ ವಾಸಿ ಪೂರ್ಣಚಂದ್ರ, ಬಂಧಿತ ಯುವಕ.

ಚೀಗಟಗೆರೆ ಗ್ರಾಮದ ಆಂಜಿನಪ್ಪ ಹಣ ಕಳೆದುಕೊಂಡಿದ್ದ ಆಟೋ ಚಾಲಕ.

ಆ.27 ರಂದು ಬೆಳಿಗ್ಗೆ 11.30ರಲ್ಲಿ ಆಟೋ ಚಾಲಕ ಆಂಜಿನಪ್ಪ ಎಸ್‌ಬಿಐ ಬ್ಯಾಂಕ್ ಎಟಿಎಂ ನಲ್ಲಿ ಹಣ ಡ್ರಾ ಮಾಡಲು ತಡಕಾಡುತ್ತಿದ್ದ ಸಂದರ್ಭದಲ್ಲಿ ಅಲ್ಲಗೆ ಬಂದ ಆರೋಪಿ ಕಾರ್ಡ್ ಸರಿಯಾಗಿ ಹಾಕಿ ಎಂದಿದ್ದಾನೆ.

ಅಂಜಿನಪ್ಪ ಆತನ ಕೈಗೆ ಕಾರ್ಡ್ ಕೊಟ್ಟು ಡ್ರಾ ಮಾಡಿ ಎಂದು ಕಾರ್ಡ್‌ನ ಪಿನ್ ಕೋಡ್ ನಮೂದಿಸಿ 40 ಸಾವಿರ ಹಣವನ್ನು ತೆಗೆಯಲು ಸೂಚಿಸಿದ್ದಾರೆ. ಆದರೆ, ಪೂರ್ಣಚಂದ್ರ ತಕ್ಷಣ ಕಾರ್ಡ್ ತೆಗೆದು ಎಟಿಎಂ ಸರಿಯಿಲ್ಲ, ಪಕ್ಕದ ಎಟಿಎಂ ನಲ್ಲಿ ಇದೇ ರೀತಿ ಟ್ರೈ ಮಾಡಿ ಎಂದು ತಿಳಿಸಿದ್ದಾನೆ.

ಅಂಜಿನಪ್ಪ ಪಕ್ಕದ ಎಟಿಎಂ ಹೋಗುತ್ತಿದ್ದಂತೆಯೇ ಇತ್ತ ಪೂರ್ಣಚಂದ್ರ ಹಣ ಡ್ರಾ ಮಾಡಿಕೊಂಡು ಪರಾರಿಯಾಗಿದ್ದಾನೆ.

ಪಕ್ಕದ ಎಟಿಎಂನಲ್ಲಿ ಡ್ರಾ ಮಾಡಲು ಆಂಜಿನಪ್ಪ ಮುಂದಾದಾಗ ಹಣ ಡ್ರಾ ಆಗಿರುವ ಬಗ್ಗೆ ತಿಳಿದು ತಕ್ಷಣ ನಗರ ಠಾಣೆಗೆ ದೂರು ನೀಡಿದ್ದಾರೆ.

ಪ್ರಕರಣ ದಾಖಲಿಸಿಕೊಂಡ ನಗರ ಠಾಣೆ ಎಸ್ಐ ಅವಿನಾಶ್ ಎಟಿಎಂ ಸಿಸಿ ಕ್ಯಾಮಾರ ದೃಶ್ಯಾವಳಿಯನ್ನು ಪರಿಶೀಲಿಸಿ ಪೂರ್ಣಚಂದ್ರನನ್ನು ಪತ್ತೆ ಹಚ್ಚಿ ಬಂಧಿಸಿದ್ದಾರೆ.

ವಿಚಾರಣೆ ವೇಳೆ ತಾನೇ ಪೂರ್ಣಚಂದ್ರ, ಹಣವನ್ನು ವಂಚಿಸಿರುವುದಾಗಿ ಒಪ್ಪಿಕೊಂಡು, ಈ ಹಿಂದೆ ಆಂಧ್ರದ ಹಿಂದೂಪುರ, ಮಡಕಶಿರಾದಲ್ಲೂ ಅಮಾಯಕರನ್ನು ವಂಚಿಸಿರುವುದಾಗಿ ತಿಳಿಸಿದ್ದಾನೆ.

ಆರೋಪಿ ಬಳಿಯಿದ್ದ 4500 ರೂ.ಗಳನ್ನು ಪೊಲೀಸರು ವಶಕ್ಕೆ ಪಡೆದುಕೊಂಡಿದ್ದಾರೆ. ಸಿಪಿಐ ವೈ.ಅಮರನಾರಾಯಣ್ ಮಾರ್ಗದರ್ಶನದಲ್ಲಿ ಎಸ್ಐ ಅವಿನಾಶ್, ಸಿಬ್ಬಂದಿಗಳಾದ ಗೋಪಿ, ಮೋಹನ್, ಲೋಕೇಶ್, ಕಾರ್ಯಾಚರಣೆಯಲ್ಲಿ ಭಾಗವಹಿಸಿದ್ದರು.

ಸರ್ಕಾರದ ಹಣವನ್ನು ಸರಿಯಾಗಿ ಉಪಯೋಗಿಸಿಕೊಳ್ಳಿ

ತುಮಕೂರು, ಸೆ.01- ಸ್ಮಾರ್ಟ್ ಸಿಟಿ ಅಡಿಯಲ್ಲಿ ಕೌಶಲ್ಯ ಅಭಿವೃದ್ಧಿಗಾಗಿ ಬಿಡುಗಡೆಯಾಗುವ ಹಣವನ್ನು ಸಾರ್ವಜನಿಕವಾಗಿ ಸದುಪಯೋಗವಾಗುವಂತೆ ಅಧಿಕಾರಿಗಳು ಬಳಸಬೇಕು ಎಂದು ಸಂಸದ ಜಿ.ಎಸ್. ಬಸವರಾಜ್ ತಿಳಿಸಿದರು.

ನಗರದ ಸ್ಮಾರ್ಟ್‌ಸಿಟಿ ಲಿಮಿಟೆಡ್‌ನ ಕಚೇರಿಯಲ್ಲಿ ಹಮ್ಮಿಕೊಂಡಿದ್ದ ಸ್ಕಿಲ್ ಪಾರ್ಕ್ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು ಸರ್ಕಾರದಿಂದ ಬಿಡುಗಡೆಯಾಗುವ ಹಣವನ್ನು ಅಧಿಕಾರಿಗಳು ವ್ಯರ್ಥಮಾಡದೇ ನಗರದ ಅಭಿವೃದ್ಧಿಗೆ ಸದುಪಯೋಗಪಡಿಸಿ ತುಮಕೂರು ನಗರದ ಚಿತ್ರಣವನ್ನು ಬದಲಾಯಿಸಿ ಉತ್ತಮ ನಗರವನ್ನಾಗಿ ನಿರ್ಮಿಸಬೇಕು ಎಂದು ಹೇಳಿದರು.

ಈ ಹಿಂದೆ ಐದು ವರ್ಷಗಳ ಕಾಲ ಸಂಸತ್‌ನ ಸದಸ್ಯನಾಗಿದ್ದಾಗ ತುಮಕೂರು ನಗರವನ್ನು ಇಂಡಸ್ಟ್ರಿಯಲ್ ಹಬ್ ಮಾಡಬೇಕೆಂಬ ಹಂಬಲವಿತ್ತು. ಆದರೆ ಅದು ಆಗ ಕೈಗೂಡಲಿಲ್ಲ, ತುಮಕೂರು ನಗರ ಬೆಂಗಳೂರಿಗೆ ಮುಖ್ಯದ್ವಾರವಾಗಿದ್ದು, ಕೈಗಾರಿಕೀಕರಣದ ಕೇಂದ್ರೀಯ ಸ್ಥಾನವನ್ನಾಗಿ ಮಾರ್ಪಾಡು ಮಾಡಬೇಕು ಎಂದು ತಿಳಿಸಿದರು.

ತಂತ್ರಜ್ಞಾನವನ್ನು ಬಳಕೆ ಮಾಡಿಕೊಂಡು ರೈತರೇ ಬೆಳೆಯ ರೋಗಗಳನ್ನು ಪತ್ತೆಹಚ್ಚಿ ಔಷಧಿ ಸಿಂಪಡಣೆ ಮಾಡುವಂತೆ ತರಬೇತಿ ನೀಡುವ ಕೆಲಸವನ್ನು ಅಧಿಕಾರಿಗಳು ಮಾಡಬೇಕು ಎಂದರು.

ಸ್ಮಾರ್ಟ್‌ಸಿಟಿ ಮಾಡಲು ನಾನು ಸಹ ಕೇಂದ್ರದಿಂದ ಆಗಬೇಕಾಗಿರುವ ಸಹಾಯವನ್ನು ಮಾಡುತ್ತೇನೆ ನಗರವನ್ನು ಸ್ವಚ್ಛ ನಗರವನ್ನಾಗಿ ಮಾಡಲು ಸದಾ ನನ್ನ ಪ್ರೋತ್ಸಾಹವಿದೆ. ನಗರೀಕರಣ ಒಬ್ಬರಿಂದ ಆಗಲು ಸಾಧ್ಯವಿಲ್ಲ. ಪ್ರತಿಯೊಬ್ಬ ನಾಗರಿಕರೂ ಸಹ ಇದರಲ್ಲಿ ತೊಡಗಿಕೊಳ್ಳಬೇಕು ಎಂದರು.

ನಗರ ಶಾಸಕ ಜಿ.ಬಿ. ಜ್ಯೋತಿಗಣೇಶ್ ಮಾತನಾಡಿ, ಸ್ಕಿಲ್ ಪಾರ್ಕ್ ಅಡಿಯಲ್ಲಿ ನಾವು ಆಗ್ರೊಬೇಸ್ ಉತ್ಪನ್ನಗಳಿಗೆ ಹೆಚ್ಚಿನ ಪ್ರೋತ್ಸಾಹ ನೀಡಬೇಕು. ಸ್ಟಾರ್ಟ್‌ಅಪ್ ಕಂಪನಿಗೆ ಹೆಚ್ಚಿನ ಉತ್ತೇಜನ ಕೊಡಬೇಕು. ಸ್ಕಿಲ್ ಪಾರ್ಕ್‌ನಲ್ಲಿ ನಗರದ ಸಾಮಾನ್ಯ ಜನರಿಗೆ ಉಪಯೋಗವಾಗುವ ತಂತ್ರಜ್ಞಾನವನ್ನು ಬಳಸಿ, ಅವರಿಗೆ ತರಬೇತಿ ನೀಡಿ ತಂತ್ರಜ್ಞಾನವನ್ನು ಅವರೇ ಬಳಸಿಕೊಳ್ಳುವಂತೆ ಪ್ರೋತ್ಸಾಹ ನೀಡಬೇಕು ಎಂದು ಸಲಹೆ ನೀಡಿದರು.

ಸಭೆಯಲ್ಲಿ ಮಹಾನಗರ ಪಾಲಿಕೆ ಆಯುಕ್ತ ಟಿ.ಭೂಬಾಲನ್, ಸ್ಮಾಟ್‌ಸಿಟಿ ಜಂಟಿ ವ್ಯವಸ್ಥಾಪಕ ನಿರ್ದೇಶಕ ವಿ.ಅಜಯ್, ಅಭಿವೃದ್ಧಿ ರೆಸಲ್ಯೂಷನ್‌ನ ಕುಂದರಹಳ್ಳಿ ರಮೇಶ್, ಮತ್ತಿತರ ಅಧಿಕಾರಿಗಳು ಉಪಸ್ಥಿತರಿದ್ದರು.

ಸೋಂಪುರ ಗ್ರಾ.ಪಂ. ಅಧ್ಯಕ್ಷೆ ಮೇಲೆ ಅವಿಶ್ವಾಸ ಮಂಡನೆ

ದಾಬಸ್‌ಪೇಟೆ ,ಸೆ.1- ನೆಲಮಂಗಲ ತಾಲೂಕು ಸೋಂಪುರ ಹೋಬಳಿಯ ಸೋಂಪುರಗ್ರಾಮ ಪಂಚಾಯಿತಿಯ ಅಧ್ಯಕ್ಷೆ ವೆಂಕಟಲಕ್ಷ್ಮಮ್ಮರವರ ಮೇಲೆ ಅವಿಶ್ವಾಸ ಮಂಡನೆ ಸಭೆಯು ದೊಡ್ಡಬಳ್ಳಾಪುರ ಉಪ ವಿಭಾಗಾಧಿಕಾರಿ ಡಾ. ಬಿ.ಆರ್.ಹರೀಶ್ ಸಮ್ಮುಖದಲ್ಲಿ ಸೋಂಪುರಗ್ರಾಮ ಪಂಚಾಯಿತಿ ಸಭಾಂಗಣದಲ್ಲಿ ನಡೆಯಿತು.

ಸೋಂಪುರಗ್ರಾಮ ಪಂಚಾಯಿತಿಯಲ್ಲಿ 25 ಸದಸ್ಯರಿದ್ದು ಅದರಲ್ಲಿ 22 ಸದಸ್ಯರು ಪಾಲ್ಗೊಂಡಿದ್ದರು. ದೊಡ್ಡಬಳ್ಳಾಪುರ ಉಪವಿಭಾಗಾಧಿಕಾರಿಡಾ. ಬಿ.ಆರ್ ಹರೀಶ್ ಸಮ್ಮುಖದಲ್ಲಿ ಅವಿಶ್ವಾಸ ಮಂಡನೆಗೆ ಉಪಾಧ್ಯಕ್ಷೆ ಮಂಜುಳ ಹಾಗು ಸದಸ್ಯರು ಕೈ ಎತ್ತುವ ಮೂಲಕ ಅವಿಶ್ವಾಸ ಮಂಡಿಸಿದರು.

ಅವಿಶ್ವಾಸ ಮಂಡನೆ ಸಭೆಯಲ್ಲಿ ಸದಸ್ಯೆ ವೆಂಕಟಲಕ್ಷ್ಮಮ್ಮ, ಚಂದ್ರಕಲಾ ಮತ್ತು ಎನ್.ಆನಂದಕುಮಾರ್‌ನ ಗೈರು ಹಾಜರಾಗಿದ್ದರು.

ಉಪ ವಿಭಾಗಾದಿಕಾರಿ ಡಾ.ಬಿ.ಆರ್.ಹರೀಶ್ ಮಾತನಾಡಿ ಸೋಂಪುರ ಗ್ರಾ.ಪಂ.ನಲ್ಲಿ 25 ಜನ ಸದಸ್ಯರಿದ್ದುಅದರಲ್ಲಿ 22 ಜನ ಸದಸ್ಯರು ಹಾಜರಾಗಿ ಮೂವರು ಗೈರುಹಾಜರಾಗಿದ್ದರು. ಅಧ್ಯಕ್ಷೆ ವೆಂಕಟಲಕ್ಷಮ್ಮ ವಿರುದ್ಧ 22ಜನ ಸದಸ್ಯರು ಅವಿಶ್ವಾಸದ ಪರ ಮಂಡನೆ ಮಾಡಿದರು,ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್‌ರಾಜ್‌ಅಧಿನಿಯಮ 49(1)ರ ಪ್ರಕಾರ ನಿಯಮಾವಳಿ ಪ್ರಕಾರ ಅವಿಶ್ವಾಸ ಮಂಡನೆಯನ್ನು ಅಂಗೀಕರಿಸಿದ್ದು ಉನ್ನತ ಅಧಿಕಾರಿಗಳಿಗೆ ಮಾಹಿತಿಯನ್ನು ತಿಳಿಸಲಾಗುವುದು ಎಂದರು.

ಈ ಸಂದರ್ಭದಲ್ಲಿ ತಹಶೀಲ್ದಾರ್ ರಾಜೀವ ಲೋಚನ, ಚುನಾವಣಾ ವಿಷಯ ನಿರ್ವಾಹಕ ರಾಜೀವ್‌ಗೌಡ, ರಾಜಸ್ವ ನಿರೀಕ್ಷಕ ಅನುಸೂಯಮ್ಮ, ಟಿ.ಪಂಚಾಕ್ಷರಿ, ಕಾರ್ಯದರ್ಶಿ ಎಚ್. ಹನುಮಂತರಾಜು ಭಾಗವಹಿಸಿದ್ದರು.